ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

3 ವರ್ಷಗಳಲ್ಲಿ ಅಂಗನವಾಡಿ ಕೇಂದ್ರಗಳಿಗೆ ನಿಗಧಿಪಡಿಸಿ ಬಿಡುಗಡೆ ಮಾಡಿ ವೆಚ್ಚ ಮಾಡಿರುವ ಮೊತ್ತವೆಷ್ಟು

ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):-

420 (372) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಈ ಅಂಗನವಾಡಿ ಕೇಂದ್ರಗಳಿಗೆ ನಿಗಧಿಪಡಿಸಿ ಬಿಡುಗಡೆ ಮಾಡಿ, ವೆಚ್ಚ ಮಾಡಿರುವ ಮೊತ್ತವೆಷ್ಟು; ಯಾವ ಯಾವ ಕಾರ್ಯಕ್ರಮಗಳಿಗೆ ವೆಚ್ಚ ಮಾಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕೋಲಾರ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಪೂರೈಸಲಾಗುತ್ತಿರುವ ಪೂರಕ ಪೌಷ್ಟಿಕಾಂಶ ಯಾವುದು;

(ಈ) ಪ್ರಸ್ತುತ ಪೂರೈಸುತ್ತಿರುವ ಪೂರಕ ಪೌಷ್ಟಿಕಾಂಶಕ್ಕೆ ಹೆಚ್ಚುವರಿ ಅನುದಾನವನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಹೆಚ್ಚುವರಿ ಅನುದಾನವನ್ನು ಯಾವಾಗಿನಿಂದ ನೀಡಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಕೋಲಾರ ಜಿಲ್ಲೆಯ ಅಂಗನವಾಡಿ ವಿಭಾಗಕ್ಕೆ ಸಿಬ್ಬಂದಿಗಳ ವೇತನಕ್ಕಾಗಿ ಪ್ರಸ್ತುತ ನೀಡುತ್ತಿರುವ ಅನುದಾನದ ಮೊತ್ತವೆಷ್ಟು;

(ಊ) ಪ್ರಸ್ತುತ ನೀಡುತ್ತಿರುವ ವೇತನದ ಮೊತ್ತವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು; ಹಾಗೂ ಯಾವಾಗಿನಿಂದ ಜಾರಿಗೊಳಿಸಲಾಗುವುದು?